# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 18.09.2018 ರಂದು ಪೂರ್ವಾಹ್ನ ಗಂಟೆ 10:30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2018ನೇ ಸಾಲಿನ ಆರನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು:**

| | |
|---|---|
| 1. **ಡಾ. ಕಿಶೋರ್ ಕುಮಾರ್ ಸಿ. ಕೆ.**<br>ಕುಲಪತಿಗಳು (ಪ್ರಭಾರ)<br>ಮಂಗಳೂರು ವಿಶ್ವವಿದ್ಯಾನಿಲಯ,<br>**ಮಂಗಳಗಂಗೋತ್ರಿ–574 199.** | ಅಧ್ಯಕ್ಷರು |
| 2. **ಶ್ರೀ ಮಹೇಶ್ ರಾವ್.**<br>ಜಂಟಿ ನಿರ್ದೇಶಕರು<br>ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ, ಮಂಗಳೂರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 3. **ಡಾ. ಈಶ್ವರ ಪಿ.**<br>ಡೀನರು, ವಾಣಿಜ್ಯ ನಿಕಾಯ<br>ಮತ್ತು ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯ ಅಧ್ಯಯನ ವಿಭಾಗ<br>ಮಂಗಳೂರು ವಿಶ್ವವಿದ್ಯಾನಿಲಯ<br>**ಮಂಗಳಗಂಗೋತ್ರಿ–574 199.** | – " – |
| 4. **ಶ್ರೀ ಜಯಪ್ರಕಾಶ್ ಆರ್.,**<br>ಪ್ರಾಕ್ಟೀಸಿಂಗ್ ಅಡ್ವೋಕೇಟ್, ನಂ.26<br>ಒಂದನೇ ಮುಖ್ಯ ರಸ್ತೆ, ವ್ಯಾಲಿಕಾವಲ್,<br>**ಬೆಂಗಳೂರು – 560 003** | – " – |
| 5. **ಶ್ರೀ ಅಶೋಕ್ ಕುಮಾರ್ ರೈ,**<br>"ಅನುರಾಗ್", ಡಿ. ನಂ.–2–30–2484/1<br>ಕಾಸ್ಮೊಸ್ ಲೇನ್, ಕದ್ರಿ ಕಂಬ್ಳ, **ಮಂಗಳೂರು** | – " – |
| 6. **ಪ್ರೊ. ಬಿ. ರಹಮತ್ ಆಲಿ**<br>ಪ್ರಾಂಶುಪಾಲರು, ಬದ್ರಿಯಾ ಪ್ರಥಮ ದರ್ಜೆ ಕಾಲೇಜು<br>ಕಂದಕ, **ಮಂಗಳೂರು – 575 001** | – " – |
| 7. **ಪ್ರೊ. ಗಣಪತಿ ಭಟ್**<br>ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು,<br>**ಪೂಂಜಾಲಕಟ್ಟೆ – 574 233** | – " – |
| 8. **ಡಾ. ಯು. ತಾರಾ ರಾವ್,**<br>ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು,<br>ಕಾವೂರು **ಮಂಗಳೂರು – 575 015.** | – " – |
| 9. **ಡಾ. ನಿತ್ಯಾನಂದ ಕೆ.,**<br>ಪ್ರಾಂಶುಪಾಲರು, ಎಸ್.ಡಿ.ಎಂ. ಕಾಲೇಜ್ ಆಫ್ ಎಜುಕೇಶನ್,<br>**ಉಜಿರೆ – 574 240.** | – " – |
| 10. **ಶ್ರೀ ಟಿ. ನಾರಾಯಣ ಗೌಡ**<br>ಪ್ರಾಂಶುಪಾಲರು<br>ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ<br>**ದಕ್ಷಿಣ ಕನ್ನಡ, ಮಂಗಳೂರು** 575001.<br>(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ) | – " – |
| 11. **ಪ್ರೊ. ರವೀಂದ್ರಾಚಾರಿ ವಿ.,**<br>ಕುಲಸಚಿವರು (ಪರೀಕ್ಷಾಂಗ)<br>ಮಂಗಳೂರು ವಿಶ್ವವಿದ್ಯಾನಿಲಯ<br>**ಮಂಗಳಗಂಗೋತ್ರಿ–574 199.** | – " – |

12. **ಪ್ರೊ. ಎ. ಎಂ. ಖಾನ್** – " –
ಕುಲಸಚಿವರು (ಆಡಳಿತ)
ಮಂಗಳೂರು ವಿಶ್ವವಿದ್ಯಾನಿಲಯ
**ಮಂಗಳಗಂಗೋತ್ರಿ–574 199.**

**ವಿಶೇಷ ಆಹ್ವಾನಿತರು:**

13. **ಡಾ. ದಯಾನಂದ ನಾಯ್ಕ್** – " –
ಹಣಕಾಸಿನ ಅಧಿಕಾರಿ (ಪ್ರಭಾರ)
ಮಂಗಳೂರು ವಿಶ್ವವಿದ್ಯಾನಿಲಯ
**ಮಂಗಳಗಂಗೋತ್ರಿ–574 199.**

**ಅನುಪಸ್ಥಿತ ಸದಸ್ಯರು:**

1. **ತಾಂತ್ರಿಕ ಶಿಕ್ಷಣ ನಿರ್ದೇಶಕರು** **ಸದಸ್ಯರು**
ಕರ್ನಾಟಕ ರಾಜ್ಯ
ಅರಮನೆ ರಸ್ತೆ, **ಬೆಂಗಳೂರು – 560 001.**

2. **ವೈದ್ಯಕೀಯ ಶಿಕ್ಷಣ ನಿರ್ದೇಶಕರು** – " –
ಕರ್ನಾಟಕ ರಾಜ್ಯ, ಆನಂದರಾವ್ ವೃತ್ತ
**ಬೆಂಗಳೂರು – 560 009.**

3. **ನಿರ್ದೇಶಕರು**
ಪದವಿ ಪೂರ್ವ ಶಿಕ್ಷಣ ಇಲಾಖೆ
ಪದವಿ ಪೂರ್ವ ಶಿಕ್ಷಣ ಭವನ, – " –
18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ
ಮಲ್ಲೇಶ್ವರಂ, **ಬೆಂಗಳೂರು 560 003.**

*********

## ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 18.09.2018 ರಂದು ಪೂರ್ವಾಹ್ನ ಗಂಟೆ 10:30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2018ನೇ ಸಾಲಿನ ಆರನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು**

**ಅನುಪಸ್ಥಿತ ಸದಸ್ಯರು:**

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

### ಪ್ರಾರಂಭಿಕ

1. ಮಾನ್ಯ ಕುಲಪತಿಯವರು, ವಿಶ್ವವಿದ್ಯಾನಿಲಯದ ನೂತನ ಕುಲಸಚಿವರಾದ ಡಾ. ಐರಾನಿ ಮೊಹಮ್ಮದ್ ಖಾನ್, ಪ್ರಾಧ್ಯಾಪಕರು, ಸ್ನಾತಕೋತ್ತರ ಇಲೆಕ್ಟ್ರಾನಿಕ್ಸ್ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ಸರ್ಕಾರದ ಆದೇಶ ಸಂಖ್ಯೆ ಇಡಿ 104 ಯುಡಿವಿ 2018 ದಿನಾಂಕ 13.08.2018ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ದಿನಾಂಕ 14.08.2018 ರಿಂದ ನೇಮಕಗೊಂಡಿರುವ ವಿಚಾರವನ್ನು ಸಭೆಗೆ ತಿಳಿಸಿ ನೂತನ ಕುಲಸಚಿವರ ಪರಿಚಯವನ್ನು ನೀಡಿ ಸಭೆಗೆ ಸ್ವಾಗತಿಸಿದರು.

2. ಮಾನ್ಯ ಕುಲಪತಿಯವರು, ವಿಶ್ವವಿದ್ಯಾನಿಲಯದ ನೂತನ ಕುಲಸಚಿವರು (ಪರೀಕ್ಷಾಂಗ) ರಾದ ಡಾ. ರವೀಂದ್ರಾಚಾರಿ ವಿ., ಪ್ರಾಧ್ಯಾಪಕರು, ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ಸರ್ಕಾರದ ಆದೇಶ ಸಂಖ್ಯೆ ಇಡಿ 104 ಯುಡಿವಿ 2018 ದಿನಾಂಕ 13.08.2018ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ಆಗಿ ನೇಮಕಗೊಂಡಿರುವ ವಿಚಾರವನ್ನು ಸಭೆಗೆ ತಿಳಿಸಿ ನೂತನ ಕುಲಸಚಿವರ ಪರಿಚಯವನ್ನು ನೀಡಿ ಸಭೆಗೆ ಸ್ವಾಗತಿಸಿದರು.

3. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಇ) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ಗೆ ಸದಸ್ಯರಾಗಿ ಘನತೆವೆತ್ತ ರಾಜ್ಯಪಾಲರಿಂದ ನಾಮನಿರ್ದೇಶನಗೊಂಡ ಶ್ರೀ ಜಯಪ್ರಕಾಶ್ ಆರ್., ಪ್ರಾಕ್ಟೀಸಿಂಗ್ ಅಡ್ವೋಕೇಟ್, ನಂ. 26, ಒಂದನೇ ಮಹಡಿ, ಒಂದನೇ ಮುಖ್ಯ ರಸ್ತೆ, ವ್ಯಾಲಿಕಾವಲ್, ಬೆಂಗಳೂರು – 560 003 ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

4. ಮಾನ್ಯ ಕುಲಪತಿಯವರು, ದಿನಾಂಕ 05.12.2017 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ಕಾರ್ಯ ನಿರ್ವಹಿಸಿದ್ದ ಪ್ರೊ. ಬಿ. ಎಸ್. ನಾಗೇಂದ್ರಪ್ರಕಾಶ್, ಇವರನ್ನು ಸರ್ಕಾರದ ಪತ್ರ ಸಂಖ್ಯೆ ಇಡಿ 104 ಯುಡಿವಿ 2018 ದಿನಾಂಕ 13.08.2018ರಂತೆ ಕುಲಸಚಿವರ ಕರ್ತವ್ಯದಿಂದ ಬಿಡುಗಡೆಗೊಳಿಸಲಾದ ವಿಷಯವನ್ನು ಸಭೆಗೆ ತಿಳಿಸಿ ಸದರಿ ಅವಧಿಯಲ್ಲಿ ಅವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಗಾಗಿ ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಿ ಅಭಿನಂದಿಸಿದರು.

5. ದಿನಾಂಕ 03.12.2015 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ಆಗಿ ಕಾರ್ಯ ನಿರ್ವಹಿಸಿದ್ದ ಪ್ರೊ. ಎ. ಎಂ. ಖಾನ್ ಇವರನ್ನು ಸರ್ಕಾರದ ಪತ್ರ ಸಂಖ್ಯೆ ಇಡಿ 104 ಯುಡಿವಿ 2018 ದಿನಾಂಕ 13.08.2018ರಂತೆ ಕುಲಸಚಿವರು (ಪರೀಕ್ಷಾಂಗ) ಕರ್ತವ್ಯದಿಂದ ಬಿಡುಗಡೆಗೊಳಿಸಲಾದ ವಿಷಯವನ್ನು ಸಭೆಗೆ ತಿಳಿಸಿ ಸದರಿ ಅವಧಿಯಲ್ಲಿ ಅವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಗಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು.

6. ಮಾನ್ಯ ರಾಜ್ಯಪಾಲರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ ಶ್ರೀ ಹರೀಶ್ ಆಚಾರ್, "ರಕ್ಷಾ" ವಿ.ಎಸ್.ಎಸ್. ಬ್ಯಾಂಕ್ ಹತ್ತಿರ, ನಾಗುರಿ, ಕಂಕನಾಡಿ, ಮಂಗಳೂರು – 575 002 ಇವರನ್ನು ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರ ಪತ್ರ ಸಂಖ್ಯೆ GS/2/MLM/2017 ದಿನಾಂಕ 24.07.2018 ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯತ್ವದಿಂದ ಮುಕ್ತಗೊಳಿಸಲಾದ ವಿಷಯವನ್ನು ಸಭೆಗೆ ತಿಳಿಸಿ ಸದರಿ ಅವಧಿಯಲ್ಲಿ ಅವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಗಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು.

7. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಸ್ತುವಿಜ್ಞಾನ ವಿಭಾಗದಲ್ಲಿ ಪ್ರಾಧ್ಯಾಪಕರು ಹಾಗೂ ಅಧ್ಯಕ್ಷರಾಗಿದ್ದ ಪ್ರೊ. ಜಯಗೋಪಾಲ್ ಉಚ್ಚಿಲ್ ಇವರು ದಿನಾಂಕ 17.08.2018ರಂದು ದೈವಾಧೀನರಾಗಿರುತ್ತಾರೆ. ಸದರಿಯವರು ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ನ ಸದಸ್ಯರಾಗಿ ಸೆನೆಟ್ ಹಾಗೂ ಶೈಕ್ಷಣಿಕ ಮಂಡಳಿ ಸದಸ್ಯರಾಗಿ, ವಿಜ್ಞಾನ ನಿಕಾಯದ ಡೀನ್‌ರಾಗಿ, ವಿಶ್ವವಿದ್ಯಾನಿಲಯದ ವಿವಿಧ ಸಮಿತಿಗಳಲ್ಲಿ ಕಾರ್ಯನಿರ್ವಹಿಸಿ ವಿಶ್ವವಿದ್ಯಾನಿಲಯದ ಆಡಳಿತ ಮತ್ತು ಶೈಕ್ಷಣಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು.

ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯು ತನ್ನ ಸಂತಾಪವನ್ನು ವ್ಯಕ್ತಪಡಿಸುತ್ತಾ, ಅಗಲಿದ ದಿವ್ಯಾತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದೂ ಹಾಗೂ ಇವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಕುಟುಂಬದವರಿಗೆ ಹಾಗೂ ಶಿಷ್ಯವರ್ಗಕ್ಕೆ ನೀಡಲಿ ಎಂದು ಕೋರುವ ಈ ಸಂತಾಪ ಸೂಚಕ ನಿರ್ಣಯವನ್ನು ಸಿಂಡಿಕೇಟ್ ಸಭೆಯಲ್ಲಿ ಅಂಗೀಕರಿಸಲಾಯಿತು.

## ಪ್ರಸ್ತಾವಿಕ

1. ಕೊಡಗು ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಉಂಟಾದ ಹಾನಿಯಿಂದಾಗಿ ವಿದ್ಯಾರ್ಥಿಗಳಿಗೆ ಸರಿಯಾಗಿ ತರಗತಿಗಳು ನಡೆಸಲು ಸಾಧ್ಯವಾಗದಿದ್ದುದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೊಡಗು ಜಿಲ್ಲೆಯ ವಿಶ್ವವಿದ್ಯಾನಿಲಯದ ವ್ಯಾಪ್ತಿಯಡಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ಶೈಕ್ಷಣಿಕ ವರ್ಷ 2018–19ನೇ ಸಾಲಿನ ತರಗತಿಗಳನ್ನು ಒಂದು ವಾರ ಮುಂದೂಡಲು ಹಾಗೂ ಒಕ್ಟೋಬರ್ /ನವೆಂಬರ್ 2018ರ ಪದವಿ ಪರೀಕ್ಷೆಗಳನ್ನು ಮುಂದೂಡಲು ಸಭೆಯಲ್ಲಿ ನಿರ್ಣಯಿಸಲಾಯಿತು.

2. ಮಾನ್ಯ ಕುಲಪತಿಗಳು, ಇತ್ತೀಚೆಗೆ ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿಯಲ್ಲಿ ವಿದ್ಯಾರ್ಥಿಗಳಿಂದ ನಡೆದ ಮುಷ್ಕರದ ಬಗ್ಗೆ ಸಭೆಗೆ ವಿವರಣೆ ನೀಡುತ್ತಾ, ಈಗಾಗಲೇ ತನಿಖೆ ಮಾಡಿ ಆರೋಪಿಗೆ ಶಿಕ್ಷೆ ಕೊಡಬೇಕೆಂದು ಪೋಲೀಸ್ ಇಲಾಖೆಗೆ ದೂರು ನೀಡಿರುವ ಬಗ್ಗೆ ತಿಳಿಸಿದರು.

3. ಗಾಂಧಿ ಜಯಂತಿಯ 150ನೇ ವರ್ಷಾಚರಣೆ ಅಂಗವಾಗಿ ವಿಶ್ವವಿದ್ಯಾನಿಲಯದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಚರ್ಚಿಸಲಾಗಿ, ವರ್ಷವಿಡೀ ಕೆಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಮಾನ್ಯ ಕುಲಪತಿಗಳು ಸಭೆಯಲ್ಲಿ ತಿಳಿಸಿದರು.

4. ಅಂತಯೇ ಸ್ವಾಮಿ ವಿವೇಕಾನಂದರವರು ಚಿಕಾಗೋ ಭಾಷಣದ 125ನೇ ವರ್ಷಾಚರಣೆ ಅಂಗವಾಗಿ ವರ್ಷವಿಡಿ ಕೆಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಮಾನ್ಯ ಕುಲಪತಿಗಳು ಸಭೆಯಲ್ಲಿ ತಿಳಿಸಿದರು.

### I ನಡಾವಳಿಗಳ ದೃಢೀಕರಣ

1. ದಿನಾಂಕ 25.07.2018ರಂದು ನಡೆದ 2018ನೇ ಸಾಲಿನ ಐದನೆಯ ಸಾಮಾನ್ಯ ಸಭೆಯ ನಡಾವಳಿಯನ್ನು ದೃಢೀಕರಿಸಲಾಯಿತು.

### II ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 23.05.2018ರಂದು ನಡೆದ ಸಿಂಡಿಕೇಟಿನ 2018ನೇ ಸಾಲಿನ ತೃತೀಯ ವಿಶೇಷ ಸಭೆಯ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

2. ದಿನಾಂಕ 04.06.2018ರಂದು ನಡೆದ ಸಿಂಡಿಕೇಟಿನ 2018ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

### III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಸಾಸ6:1(2018)

**ವಿಷಯ :** ಪದವಿ ಮತ್ತು ಸ್ನಾತಕೋತ್ತರ ಸಂಯುಕ್ತ ಮನಃಶಾಸ್ತ್ರ ಅಧ್ಯಯನ ಮಂಡಳಿಯ ಪುನರ್‌ರಚನೆಯ ಬಗ್ಗೆ.

**ನಿರ್ಣಯ:** ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಸಾಸ6:2(2018)

**ವಿಷಯ :** ಸ್ನಾತಕೋತ್ತರ ಕನ್ನಡ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಸಾಸ6:3(2018)

**ವಿಷಯ :** ಹಣಕಾಸು ಸಮಿತಿಗೆ ಸಿಂಡಿಕೇಟ್‌ನಿಂದ ಓರ್ವ ಸದಸ್ಯರ ನಾಮನಿರ್ದೇಶನದ ಬಗ್ಗೆ.

**ನಿರ್ಣಯ:** ಸದಸ್ಯರನ್ನು ನಾಮನಿರ್ದೇಶನ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ6:4(2018)

**ವಿಷಯ :** 2017–18ನೇ ಸಾಲಿಗೆ ಕಂಪ್ಯೂಟರ್ / ಪ್ರಿಂಟರ್‌ಗಳ ವಾರ್ಷಿಕ ನಿರ್ವಹಣೆಗೆ ನೀಡಿದ ಗುತ್ತಿಗೆ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ನಿರ್ಣಯ:** ಹೊಸ ಗುತ್ತಿಗೆ ಪ್ರಾರಂಭವಾಗುವವರೆಗೆ ಹಾಲಿ ಗುತ್ತಿಗೆದಾರರ ಧಾರಣಾ ಗುತ್ತಿಗೆ ಅವಧಿಯನ್ನು ಅದೇ ದರ ಮತ್ತು ಷರತ್ತಿನಲ್ಲಿ ವಿಸ್ತರಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ6:5(2018)

**ವಿಷಯ :** ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ Smart Phone ಮೊಬೈಲ್ ಖರೀದಿಯಲ್ಲಿ ಸಿಂಡಿಕೇಟು ನಿಗದಿಪಡಿಸಿದ್ದಕ್ಕಿಂತ ಹೆಚ್ಚುವರಿ ಪಾವತಿಸಿದ ಮೊತ್ತಕ್ಕೆ ಘಟನೋತ್ತರ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಅಭಿವೃದ್ಧಿ ಸಾಸ6:6(2018)

**ವಿಷಯ :** DBT ಪ್ರಾಜೆಕ್ಟ್, ಜೀವವಿಜ್ಞಾನ ವಿಭಾಗ – ಸಂಶೋಧನಾ ಪ್ರಾಜೆಕ್ಟ್ ವರ್ಗಾವಣೆ ಬಗ್ಗೆ.

**ನಿರ್ಣಯ:** ಅನುದಾನಿತ ಸಂಸ್ಥೆಯು ಈಗಾಗಲೇ ಪ್ರಾಜೆಕ್ಟ್ ವರ್ಗಾಯಿಸಲು ಅನುಮತಿ ನೀಡಿರುವುದರಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಸೆಕ್ಷನ್ 29 (1) ಮತ್ತು (2) (ಎ)ಯ ಅವಕಾಶದಂತೆ ಪ್ರಾಜೆಕ್ಟ್ ವರ್ಗಾಯಿಸಲು ಅನುಮತಿ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾಸ6:7(2018)

**ವಿಷಯ :** ಎಪ್ರಿಲ್/ಮೇ/ಜೂನ್ 2018ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳು – ದಂಡನೆಯನ್ನು ದೃಢಪಡಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾಪಿಸಲಾದ ದಂಡನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾಸ6:8(2018)

**ವಿಷಯ :** ಜೂನ್ 2018ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ಅಂಚೆ ತೆರಪಿನ ಶಿಕ್ಷಣ ಪದವಿ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ.

**ನಿರ್ಣಯ:** ಪರೀಕ್ಷಾ ಅವ್ಯವಹಾರ ತನಿಖಾ ಸಮಿತಿಯು ಸಲ್ಲಿಸಿರುವ ವರದಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾಸ 6:9(2018)

**ವಿಷಯ :** ಪದವಿ ಮತ್ತು ಸ್ನಾತಕೋತ್ತರ ಹಿಂದಿ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾಸ 6:10(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗಕ್ಕೆ ಡಾ. ಕೆ. ಗೋಪಾಲಕೃಷ್ಣ ನಾಯ್ಕ್‌ರವರನ್ನು ದಿನಾಂಕ 31.12.2018ರ ವರೆಗೆ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾಸ 6:11(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಸಮೂಹ ಮಾಧ್ಯಮ ಹಾಗೂ ಪತ್ರಿಕೋದ್ಯಮ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಸಮೂಹ ಮಾಧ್ಯಮ ಹಾಗೂ ಪತ್ರಿಕೋದ್ಯಮ ಅಧ್ಯಯನ ವಿಭಾಗಕ್ಕೆ ದಿನಾಂಕ 01.10.2018 ರಿಂದ 31.12.2018ರ ವರೆಗೆ ಪ್ರಭಾರ ಅಧ್ಯಕ್ಷರಾಗಿ ಪ್ರೊ.ಪಿ.ಎಲ್. ಧರ್ಮ ಇವರನ್ನು ನೇಮಕ ಮಾಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾಸ 6:12(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ದಿನಾಂಕ 01.10.2018 ರಿಂದ 31.12.2018 ರ ವರೆಗೆ ಡಾ.ಪಾವ್ಲ್ ಜೆರಾಲ್ಡ್ ಆಕ್ವಿನ್ಸ್, ಸಹ ಪ್ರಾಧ್ಯಾಪಕರು ಇವರನ್ನು ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾಸ 6:13(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯ ಗ್ರಂಥಾಲಯಕ್ಕೆ ಅಳವಡಿಸಿದ Turnitin Anti Plagiarism Check software ನವೀಕರಣ ವೆಚ್ಚಕ್ಕೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಸದರಿ ಸಾಫ್ಟ್‌ವೇರ್‌ನ ತಯಾರಿಕಾ ಸಂಸ್ಥೆಯಾದ M/s Turnitin LIC, USA ಇವರಿಂದ ನವೀಕರಣಗೊಳಿಸಲು ತಗಲುವ ವೆಚ್ಚ USD 5,775/- ರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾಸ 6:14(2018)

**ವಿಷಯ :** ದೂರ ಶಿಕ್ಷಣ ಕೇಂದ್ರದ ವಿವಿಧ ಕೋರ್ಸುಗಳ ಅಧ್ಯಯನ ಸಾಮಾಗ್ರಿ ಪುಸ್ತಕಗಳ ಮುಖಪುಟ ಮುದ್ರಣ ಬೈಂಡಿಂಗ್ ಹಾಗೂ ಜೆರಾಕ್ಸ್ ಮಾಡುವ ಕಾರ್ಯವನ್ನು ನಿರ್ವಹಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ದಿನಾಂಕ 14.09.2018ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾಸ 6:15(2018)

**ವಿಷಯ :** ಶೈಕ್ಷಣಿಕ ವರ್ಷ 2018–19ನೇ ಸಾಲಿಗೆ ಸಂಯೋಜಿತ ಕಾಲೇಜುಗಳಲ್ಲಿ ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾಸ 6:16(2018)

**ವಿಷಯ :** ಶೈಕ್ಷಣಿಕ ವರ್ಷ 2018–19ನೇ ಸಾಲಿಗೆ ಸಂಯೋಜಿತ ಕಾಲೇಜುಗಳಲ್ಲಿ ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾಸ 6:17(2018)

**ವಿಷಯ :** 'ಮಹೇಶ್ ಕಾಲೇಜ್ ಆಫ್ ಕಾಮರ್ಸ್ ಆಂಡ್ ಮೇನೇಜ್‌ಮೆಂಟ್' ಮಂಗಳೂರು ಕಾಲೇಜಿನ ಹೆಸರನ್ನು ತೃಷಾ ಕಾಲೇಜ್ ಆಫ್ ಕಾಮರ್ಸ್ ಆಂಡ್ ಮೇನೇಜ್‌ಮೆಂಟ್, ಮಂಗಳೂರು ಎಂದು ಬದಲಾಯಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾಸ 6:18(2018)

**ವಿಷಯ :** ಶೈಕ್ಷಣಿಕ ವರ್ಷ 2018–19ನೇ ಸಾಲಿಗೆ ಸಂಯೋಜಿತ ಕಾಲೇಜುಗಳಲ್ಲಿ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:19(2018)

**ವಿಷಯ :** ಕುಲಸಚಿವರ ಕಛೇರಿಗೆ ಅಗತ್ಯವಿದ್ದ 5 KVA Online with Isolation Transformer UPS ಮತ್ತು Battery ಗಳನ್ನು ವಿನಿಮಯ ದರದಲ್ಲಿ ಖರೀದಿಸಲು ಮಂಜೂರಾತಿ ಕುರಿತು.

**ನಿರ್ಣಯ:** ವಿಶ್ವವಿದ್ಯಾನಿಲಯದ ಅನುಮೋದನೆಗೊಂಡ ಧಾರಣಾ ಗುತ್ತಿಗೆ ದರದಂತೆ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:20(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಇಲೆಕ್ಟ್ರಾನಿಕ್ಸ್ ವಿಭಾಗಕ್ಕೆ ಪೀಠೋಪಕರಣ ಖರೀದಿ ಕುರಿತು

**ನಿರ್ಣಯ:** ದಿನಾಂಕ 14.09.2018 ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:21(2018)

**ವಿಷಯ :** ವಿಶ್ವವಿದ್ಯಾನಿಲಯ ಕಾರ್ಯಕಾರಿ ಅಭಿಯಂತರರ ಕಛೇರಿಗೆ ಅಗತ್ಯವಿರುವ ಗೋದ್ರೇಜ್ ಪೀಠೋಪಕರಣಗಳ ಖರೀದಿ ಕುರಿತು.

**ನಿರ್ಣಯ:** ದಿನಾಂಕ 14.09.2018 ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:22(2018)

**ವಿಷಯ :** ಶ್ರೀ ಮಂಜುನಾಥ ಬಂಗೇರ, ಅನುಚರ, ಕಾರ್ಯಕಾರಿ ಅಭಿಯಂತರರ ಕಛೇರಿ, ಇವರ ಪತ್ನಿಯ ವೈದ್ಯಕೀಯ ವೆಚ್ಚ ಮರುಭರಣೆಯ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:23(2018)

**ವಿಷಯ :** ಶ್ರೀಮತಿ ಹೇಮ ಕೆ., ಪ್ರಥಮ ದರ್ಜೆ ಸಹಾಯಕಿ, ಕುಲಸಚಿವರು (ಪರೀಕ್ಷಾಂಗ) ಕಚೇರಿ ಇವರ ವೈದ್ಯಕೀಯ ವೆಚ್ಚ ಮರುಭರಣೆಯ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:24(2018)

**ವಿಷಯ :** ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಇಲ್ಲಿಗೆ ಪೀಠೋಪಕರಣ ಖರೀದಿ ಕುರಿತು.

**ನಿರ್ಣಯ:** ದಿನಾಂಕ 18.07.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:25(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಿಗೆ ಬೇಕಾದ ITC Lectern Podium with Built in Amplifier and Speaker Model T-6236B ಗಳನ್ನು ಖರೀದಿಸುವ ಬಗ್ಗೆ.

**ನಿರ್ಣಯ:** ದಿನಾಂಕ 14.09.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾಸ 6:26(2018)

**ವಿಷಯ :** ದೈಹಿಕ ಶಿಕ್ಷಣ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಅಂತರ್ ವಿಶ್ವವಿದ್ಯಾನಿಲಯ ಕ್ರೀಡಾ ಚಟುವಟಿಕೆಗಳಿಗೆ ಟ್ರ್ಯಾಕ್ ಸೂಟ್ ಖರೀದಿಸುವ ಬಗ್ಗೆ.

**ನಿರ್ಣಯ:** ದಿನಾಂಕ 18.07.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾಸ 6:27(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ 2017–18ನೇ ಸಾಲಿನ ವಾರ್ಷಿಕ ವರದಿಯನ್ನು ಮುದ್ರಿಸಿ (ಕನ್ನಡ ಮತ್ತು ಆಂಗ್ಲ) ಸರಬರಾಜು ಮಾಡುವ ಬಗ್ಗೆ.

**ನಿರ್ಣಯ:** ದಿನಾಂಕ 14.09.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ ಸಾಸ 6:28(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ IQAC ವಿಭಾಗಕ್ಕೆ ಹೊಸ ಜೆರಾಕ್ಸ್ ಯಂತ್ರ ಖರೀದಿ ಕುರಿತು.

**ನಿರ್ಣಯ:** ದಿನಾಂಕ 14.09.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಸಾಸ 6:29(2018)

**ವಿಷಯ :** ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾಸ 6:30(2018)

**ವಿಷಯ :** ಕೊಡಗು ಜಿಲ್ಲೆಯಲ್ಲಿ ಉಂಟಾದ ಪ್ರಕೃತಿ ವಿಕೋಪದಿಂದ ತೊಂದರೆ ಅನುಭವಿಸಿರುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ನೆರವು ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಗೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ತೊಂದರೆಗೊಳಗಾದ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ವಿನಾಯಿತಿ ಕೊಡಲು, ವಸತಿ ನಿಲಯದಲ್ಲಿ ಉಚಿತ ವಾಸ್ತವ್ಯದ ಅವಕಾಶ ಕಲ್ಪಿಸಲು ಮತ್ತು ವಿಶ್ವವಿದ್ಯಾನಿಲಯಕ್ಕೆ ಸಂಬಂಧಪಟ್ಟ ದಾಖಲೆಗಳು ಕಳೆದುಕೊಂಡಲ್ಲಿ ಉಚಿತವಾಗಿ ಆ ದಾಖಲೆಗಳನ್ನು ವಿತರಿಸಲು ವಿಶ್ವವಿದ್ಯಾನಿಲಯದ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡೀವಿ ಸಾಸ 6:31(2018)

**ವಿಷಯ :** BRNS CRP, CARER – ಕೇಂದ್ರದ ಪ್ರಯೋಗಾಲಯದಲ್ಲಿ Scientific Audio Visual Documentary ಸೌಲಭ್ಯ ಅಳವಡಿಕೆಗೆ ಸಂಬಂಧಿಸಿದ ಪ್ರಸ್ತಾವನೆ ಮಂಜೂರಾತಿ ಬಗ್ಗೆ.

**ನಿರ್ಣಯ:** ದಿನಾಂಕ 14.09.2018ರಂದು ನಡೆದ ಖರೀದಿ ಸಮಿತಿ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡೀವಿ ಸಾಸ 6:32(2018)

**ವಿಷಯ :** DST – SERB ಪ್ರಾಜೆಕ್ಟ್, ಜೀವ ವಿಜ್ಞಾನ ವಿಭಾಗ – ಸಂಶೋಧನಾ ಪ್ರಾಜೆಕ್ಟ್ ವರ್ಗಾವಣೆ ಬಗ್ಗೆ.

**ನಿರ್ಣಯ:** ಡಾ.ಸುರೇಶ್ ಪಿ.ಎಸ್. ನಿರ್ವಹಿಸುತ್ತಿದ್ದ DST – SERB ಪ್ರಾಜೆಕ್ಟ್‌ನ ಉಪಕರಣ, ಉಳಿಕೆ ಅನುದಾನ ಮತ್ತು ಪ್ರಾಜೆಕ್ಟ್ ಫೆಲೋ ಜೊತೆ National Institute of Technology, Calicut ಗೆ ವರ್ಗಾಯಿಸಲು ಅನುಮತಿ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿ೯ವಿ ಸಾಸ 6:33(2018)

**ವಿಷಯ :** Medical Physics Division, ಮಂಗಳೂರು ವಿಶ್ವವಿದ್ಯಾನಿಲಯ – ಧಾರಣಾ ಗುತ್ತಿಗೆ ದರದಲ್ಲಿ 10 KVA UPS ಮತ್ತು ಬ್ಯಾಟರಿಗಳ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಅನುಮೋದನೆಗೊಂಡ ಧಾರಣಾ ಗುತ್ತಿಗೆ ದರದಂತೆ ಖರೀದಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾಸ 6:34(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರ ಇಲ್ಲಿಗೆ ಪ್ರಭಾರ ನಿರ್ದೇಶಕರ ನೇಮಕಾತಿ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾಸ 6:35(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಗೆ ಸಂಬಂಧಿಸಿದಂತೆ ಸಭೆಯಲ್ಲಿ ಚರ್ಚಿಸಲಾಗಿ ಈ ಕೆಳಗಿನಂತೆ ಮೂರು ಹೆಸರುಗಳನ್ನು ಕ್ರಮವಾಗಿ ಸೂಚಿಸಿ ಮಾನ್ಯ ಕುಲಪತಿಯವರಿಗೆ ಸದರಿಯವರನ್ನು ಕರೆದು ಮಾತನಾಡಿ ಅವರಿಗೆ ಪ್ರಭಾರ ನಿರ್ದೇಶಕರಾಗಿ ನೇಮಿಸಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

1. ಪ್ರೊ.ಕೆ.ಎಸ್.ಜಯಪ್ಪ, ಸಾಗರ ಭೂ ವಿಜ್ಞಾನ ವಿಭಾಗ
2. ಪ್ರೊ. ಬಾಲಕೃಷ್ಣ ಕಲ್ಲೂರಾಯ, ರಸಾಯನಶಾಸ್ತ್ರ ವಿಭಾಗ
3. ಪ್ರೊ. ವೈ.ನಾರಾಯಣ, ಭೌತಶಾಸ್ತ್ರ ವಿಭಾಗ

ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/–
**ಕುಲಸಚಿವರು**

ಸಹಿ/–
**ಕುಲಪತಿಗಳು**